# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2022-23 ನೇ ಸಾಲಿನಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗ ಮತ್ತು ಅಲ್ಪಸಂಖ್ಯಾತ ಅಭ್ಯರ್ಥಿಗಳಿಗೆ UPSC / KAS / Banking / Group-C / SSC / RRB / Judicial Services / Air Hostess ಹುದ್ದೆಗಳಿಗೆ ಖಾಸಗಿ ತರಬೇತಿ ಸಂಸ್ಥೆಗಳ ಮೂಲಕ ಪೂರ್ವಭಾವಿ ತರಬೇತಿ ನೀಡುವ ಬಗ್ಗೆ.

**ಓದಲಾಗಿದೆ:**

1. 2022-23 ನೇ ಸಾಲಿನ ಆಯವ್ಯಯದ ಕಂಡಿಕೆ 178 ರಲ್ಲಿ ಘೋಷಿಸಿರುವಂತೆ.
2. ಸರ್ಕಾರದ ಆದೇಶ ಸಂಖ್ಯೆ: ಸಕಇ 195 ಪಕವಿ 2022, ದಿನಾಂಕ: 18.04.2022.
3. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಇವರ ಏಕ ಕಡತ ಸಂಖ್ಯೆ: SWD-PETC0S-1/1/2022-PETC-SOCIAL WELFARE COMMISSIONER

*****

## ಪ್ರಸ್ತಾವನೆ:

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ 2022-23 ನೇ ಸಾಲಿನ ಆಯವ್ಯಯದ ಕಂಡಿಕೆ 178 ರಲ್ಲಿ ಸಮಾಜ ಕಲ್ಯಾಣ, ಪರಿಶಿಷ್ಟ ಪಂಗಡ ಕಲ್ಯಾಣ, ಹಿಂದುಳಿದ ವರ್ಗಗಳ ಕಲ್ಯಾಣ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗಳಿಂದ 50,000 ವಿದ್ಯಾರ್ಥಿಗಳಿಗೆ ಸರ್ಕಾರಿ ಉದ್ಯೋಗಕ್ಕೆ ಸ್ಪರ್ಧಾತ್ಮಕ ಪರೀಕ್ಷೆಗಳಿಗಾಗಿ ತರಬೇತಿ ನೀಡಲಾಗುವುದು ಎಂದು ಘೋಷಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ಆದೇಶದಲ್ಲಿ 2022-23ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-178 ರಂತೆ ಸಮಾಜ ಕಲ್ಯಾಣ, ಪರಿಶಿಷ್ಟ ಪಂಗಡಗಳ ಕಲ್ಯಾಣ, ಹಿಂದುಳಿದ ವರ್ಗಗಳ ಕಲ್ಯಾಣ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗಳಿಂದ 50,000 ವಿದ್ಯಾರ್ಥಿಗಳಿಗೆ ಸರ್ಕಾರಿ ಉದ್ಯೋಗಕ್ಕೆ ಸ್ಪರ್ಧಾತ್ಮಕ ಪರೀಕ್ಷೆಗಳಿಗಾಗಿ ತರಬೇತಿ ನೀಡುವ ಯೋಜನೆಯನ್ನು ಅನುಷ್ಠಾನಗೊಳಿಸಲು ಹಾಗೂ ಮೊದಲನೇ ಹಂತದಲ್ಲಿ 15,000 ಅಭ್ಯರ್ಥಿಗಳಿಗೆ ತರಬೇತಿ ನೀಡಲು ಷರತ್ತುಗಳೊಂದಿಗೆ ಆಡಳಿತಾತ್ಮಕ ಮಂಜೂರಾತಿ ನೀಡಿ ಆದೇಶಿಸಿದೆ.

ಸಮಾಜ ಕಲ್ಯಾಣ ಇಲಾಖೆಯ ಪರೀಕ್ಷಾ ಪೂರ್ವ ತರಬೇತಿ ಕೇಂದ್ರದ ಮೂಲಕ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗ ಮತ್ತು ಅಲ್ಪಸಂಖ್ಯಾತ ಅಭ್ಯರ್ಥಿಗಳಿಗೆ UPSC / KAS / Banking / Group-C / SSC / RRB / Judicial Services / Air Hostess ಮೊದಲಾದ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಉಪಯೋಗವಾಗುವಂತೆ ಪರೀಕ್ಷಾ ಪೂರ್ವ ತರಬೇತಿಯನ್ನು ಪ್ರತಿ ವರ್ಷ ನೀಡಲಾಗುತ್ತಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರಲ್ಲಿ ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಇವರ ಏಕ ಕಡತದಲ್ಲಿ ಪ್ರಸ್ತಾಪಿಸಿರುವಂತೆ ದಿನಾಂಕ:20-06-2022 ರಂದು ಸರ್ಕಾರದ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ ಇವರ ಅಧ್ಯಕ್ಷತೆಯಲ್ಲಿ 2022-23 ನೇ ಸಾಲಿನಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗ ಮತ್ತು ಅಲ್ಪಸಂಖ್ಯಾತ ಅಭ್ಯರ್ಥಿಗಳಿಗೆ UPSC /KAS / Banking /Group-C /SSC /RRB /Judicial Services /Air Hostess ಹುದ್ದೆಗಳಿಗೆ ತರಬೇತಿ ನೀಡುವ ಸಂಬಂಧ ನಡೆದ ಸಭೆಯಲ್ಲಿ ಚರ್ಚಿಸಿದಂತೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಸರ್ಕಾರದ ಆದೇಶದಲ್ಲಿ ಮೊದಲನೇ ಹಂತದಲ್ಲಿ 15000 ಅಭ್ಯರ್ಥಿಗಳಿಗೆ ತರಬೇತಿ ನೀಡಲು ಆದೇಶಿಸಿದ್ದು, ಇಲಾಖಾವಾರು ಅಭ್ಯರ್ಥಿಗಳ ಸಂಖ್ಯಾವಾರು ವಿವರ ಈ ಕೆಳಕಂಡಂತೆ ಸಲ್ಲಿಸಿರುತ್ತಾರೆ.

| ಕ್ರ. ಸಂ. | ಇಲಾಖೆಗಳ ವಿವರ | ಅಭ್ಯರ್ಥಿಗಳ ಸಂಖ್ಯೆ |
|---|---|---|
| 1 | ಸಮಾಜ ಕಲ್ಯಾಣ ಇಲಾಖೆ | 8330 |
| 2 | ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ | 2250 |
| 3 | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ | 2170 |
| 4 | ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ | 2250 |
| ಒಟ್ಟು | | **15000** |

1. **ತರಬೇತಿ ವೆಚ್ಚ ನಿಗಧಿ:-**

ಯು.ಪಿ.ಎಸ್.ಸಿ ಸ್ಪರ್ಧಾತ್ಮಕ ಪರೀಕ್ಷೆಯ ತರಬೇತಿ ಕೇಂದ್ರಗಳು ದೆಹಲಿ, ಹೈದರಾಬಾದ್, ಚೆನ್ನೈ ಸೇರಿದಂತೆ ಕರ್ನಾಟಕದ ವಿವಿಧ ನಗರಗಳಲ್ಲಿವೆ. ನಗರವಾರು ಭಿನ್ನ ಭಿನ್ನವಾದ ತರಬೇತಿ ಶುಲ್ಕ ನಿಗಧಿಪಡಿಸಲಾಗುವುದು. ಉಳಿದಂತೆ ಕೆ.ಎ.ಎಸ್ / ಬ್ಯಾಂಕಿಂಗ್ / ಆರ್.ಆರ್.ಬಿ / ಗ್ರೂಪ್-ಸಿ ಮೊದಲಾದ ತರಬೇತಿ ಕೇಂದ್ರಗಳು ಕರ್ನಾಟಕದಲ್ಲಿಯೇ ಇರುವ ಕಾರಣ ಒಂದೇ ತರಬೇತಿ ಶುಲ್ಕವನ್ನು ನಿಗಧಿಪಡಿಸಲಾಗುವುದು.

| ಸ್ಪರ್ಧಾತ್ಮಕ ಪರೀಕ್ಷೆ | ತರಬೇತಿ ವೆಚ್ಚ (ಪ್ರತಿ ಅಭ್ಯರ್ಥಿಗೆ) | ತರಬೇತಿ ಅವಧಿ (ತಿಂಗಳುಗಳಲ್ಲಿ) |
|---|---|---|
| UPSC | 1,50,000 | 9 |
| KAS | 45,000 | 7 |
| Banking | 21,000 | 3 |
| RRB | 21,000 | 3 |
| SSC | 21,000 | 3 |
| Group-C | 21,000 | 3 |
| Judicial Services | 21,000 | 3 |
| Air Hostess | 21,000 | 3 |

2. **ಕೋರ್ಸ್ ವಾರು ತರಬೇತಿ ವೆಚ್ಚ :-**

ನಾಲ್ಕು ಇಲಾಖೆಗೆ ನಿಗಧಿಪಡಿಸಲಾದ 08 ವಿವಿಧ ಸ್ಪರ್ಧಾತ್ಮಕ ಪರೀಕ್ಷೆ ಹಾಗೂ ತರಬೇತಿಗಳಿಗೆ ಈ ಕೆಳಕಂಡಂತೆ ಅಂದಾಜು ವೆಚ್ಚವಾಗಬಹುದಾಗಿದೆ.

| ತರಬೇತಿ | ಸಮಾಜ ಕಲ್ಯಾಣ ಇಲಾಖೆ | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ | ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ | ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ | ಒಟ್ಟು (ರೂ. ಗಳಲ್ಲಿ) |
|---|---|---|---|---|---|
| **ಯು.ಪಿ.ಎಸ್.ಸಿ** | 340 x 150000 | 125 x 150000 | 100 x 150000 | 100 x 150000 | **9,97,50,000** |
| | **5,10,00,000** | **1,87,50,000** | **1,50,00,000** | **1,50,00,000** | |